ದಿನಾಂಕ : 22-10-2019 ಸಿಸಿ ಸಂಖ್ಯೆ: 571/2017 _

ಪಿಡಬ್ಲ್ಯೂ-1 (ರವಿಕುಮಾರ್ )

ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಪಿರ್ಯಾದಿ ಪರ ಶ್ರೀ ಹೆಚ್ ಎನ್ ಎಸ್ ವಕೀಲರಿಂದಃ

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ನಾನು ಹಾಜರು ಪಡಿಸಿರುವ ಕೆನರಾ ಬ್ಯಾಂಕಿನ ಚೆಕ್ ಸಂಖ್ಯೆ 771772 ನೇದನ್ನು ಹಾಜರುಮಾಡಿದ್ದು ಅದನ್ನು ನಿಪಿ-1 ಎಂದು, ಬ್ಯಾಂಕಿನವರು ನೀಡಿದ ವರದಿಯನ್ನು ನಿಪಿ-2 ಎಂದು, ನಮ್ಮ ವಕೀಲರ ಮೂಲಕ ಹೊರಡಿಸಿದ ನೋಟಿಸಿನ ಕಛೇರಿಯ ಪ್ರತಿಯನ್ನು ನಿಪಿ-3 ಎಂದು, ಅಂಚೆ ರಶೀದಿಯನ್ನು ನಿಪಿ-4 , ಅಂಚೆ ಸ್ವೀಕೃತಿಯನ್ನು ನಿಪಿ-5 ಎಂದು ಗುರುತಿಸಲಾಯಿತು.

**ಪಾಟೀಸವಾಲುಃ ಆರೋಪಿತರ ಪರ ವಕೀಲರಿಂದಃ ಕಾಲಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.**

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

ಪ್ರಧಾನ ನ್ಯಾಯಿಕ ದಂಡಾಧಿಕಾರಿಗಳು
ಮಾಗಡಿ